36

ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಗುಡೇಕೋಟೆ

ಸಂ/ಕಂ/ಹ.ಬ./ನಾಕಗು/28/2014-15. ದಿನಾಂಕ:21-06-2016.

| ವಾದಿಗಳು | ಪ್ರತಿವಾದಿಗಳು |
| --- | --- |
| ಗೋಣಿ ಬೋರಯ್ಯ ತಂದೆ ಲೇಟ್ ಮುದ್ದಯ್ಯ<br>ಕುರಿಹಟ್ಟಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಗುಡೇಕೋಟೆ |
| ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 70ಇ. ವಿಸ್ತೀರ್ಣ 4-07 ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 70ಇ. ವಿಸ್ತೀರ್ಣ 4-07 ಎಕ್ರೆ ಜಮೀನನ್ನು ಸದರಿ ತಾಲೂಕು ಕುರಿಹಟ್ಟಿ ಗ್ರಾಮದ ಗೋಣಿ ಬೋರಯ್ಯ ತಂದೆ ಲೇಟ್ ಮುದ್ದಯ್ಯ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಮಾಕನಡುಕು ಇವರು ನಮೂನೆ-21 ನೋಟಿಸನ್ನು ದಿನಾಂಕ 06-03-2014. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ತಪ್ಪು ವಂಶವೃಕ್ಷ ನೀಡಿ ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 29/2013-14. ದಿನಾಂಕ 07-04-2014. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 07-12-2014. ರಿಂದ 21-06-2016 ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಮಾಕನಡುಕು ಗ್ರಾಮದ ಸನಂ 70ಇ. ವಿಸ್ತೀರ್ಣ 4-07 ಎಕ್ರೆ ಜಮೀನು ನನ್ನ ದೊಡ್ಡಪ್ಪನ ಮಕ್ಕಳಾದ ಹುರಳಿಹಾಳು ಸಿದ್ದಯ್ಯ ಮತ್ತು ಚೌಡಯ್ಯ ಇವರ ಹೆಸರಲ್ಲಿ ಖಾತೆ ಇರುತ್ತದೆ. ಹುರಳಿಹಾಳು ಸಿದ್ದಯ್ಯ ಇವರು 1980 ರಂದು ಚೌಡಯ್ಯ ಇವರು 1985 ರಂದು ನನ್ನ ತಂದೆ ಮುದ್ದಯ್ಯ ಇವರು 1952. ಮತ್ತು ನನ್ನ ತಾಯಿ ಓಬಮ್ಮ ಇವರು 1964 ರಂದು ನನ್ನ ಅತ್ತಿಗೆ ನಾಗಮ್ಮ ಇವರು 1964 ರಂದು ನಿಧನ ಹೊಂದಿರುತ್ತಾರೆ. ಹುರಳಿಹಾಳು ಸಿದ್ದಯ್ಯ ಇವರು ಅವಿವಾಹಿತರಾಗಿದ್ದು ಚೌಡಯ್ಯ ಇವರಿಗೆ ಸಂತಾನ ಇರುವುದಿಲ್ಲ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಮತ್ತು ಒಪ್ಪಿಗೆ ಪತ್ರ ಪ್ರಕಾರ ಅವರ ಹೆಸರುಗಳನ್ನು ಕಡಿಮೆ ಮಾಡಿ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಸದರಿ ಜಮೀನಿನ ಬಗ್ಗೆ ಕಂದಾಯ ಪರಿವೀಕ್ಷಕರು ಗ್ರಾಮದಲ್ಲಿ ಮರು ವಿಚಾರಣೆ ಮಾಡಲಾಗಿ ಹಾಲಿ ಪಟ್ಟದಾರರ ವಂಶವೃಕ್ಷಕ್ಕೂ ಅರ್ಜಿಗೂ ಹೊಂದಾಣಿಕೆ ಇಲ್ಲದ ಕಾರಣ ಯಥಾಸ್ಥಿತಿಯಂತೆ ಮುಂದುವರೆಸಲು ವರದಿ ಸಲ್ಲಿಸಿರುತ್ತಾರೆ. ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

34

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಮಾಕನಡುಕು ಗ್ರಾಮದ ಸನಂ 70ಇ. ವಿಸ್ತೀರ್ಣ 4-07 ಎಕ್ರೆ ಜಮೀನು ಹಾಲಿ ಪಟ್ಟದಾರರ ವಂಶವೃಕ್ಷಕ್ಕೂ ಹಾಗೂ ಅರ್ಜಿಗೂ ತಾಳೆ ಇಲ್ಲದ ಕಾರಣ ಅರ್ಜಿದಾರರ ಕೋರಿಕೆಯನ್ನು ತಳ್ಳಿಹಾಕುತ್ತಾ ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 21-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಗುಡೇಕೋಟೆ

ಉಪತಹಶೀಲ್ದಾರರು
ನಾಡ ಕಾರ್ಯಾಲಯ
ಗುಡೇಕೋಟೆ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಗೋಣಿ ಬಸಯ್ಯ ತಂದೆ ಲೇಟ್ ಮುದ್ದಯ್ಯ ಕುರಿಹಟ್ಟಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಗುಡೇಕೋಟೆ ಇವರಿಗೆ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.